# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು.

**ಓ ಎಸ್ ನಂ.293-2014** **ಪಿ. ಡಬ್ಲುಃ 1**

| | |
|---|---|
| ಸಾಕ್ಷಿದಾರರ ಹೆಸರು<br>ವಾಸ್ತವ್ಯ | ಸಿ.ವಿ.ಸುಬ್ರಮಣ್ಯಂ<br>ಬೆಂಗಳೂರು |
| | **ಸತ್ಯ ಪ್ರತಿಜ್ಞೆಯ** ಮೇರೆಗೆ **ದಿನಾಂಕ** 31-08-2023. |

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ.ಎಂ.ಎಂ ವಕೀಲರಿಂದಃ**

ನಾನು ಚೆನ್ನರಾಜೇ ಅರಸ್ ರವರಿಗೆ ಆಗಿರುವ ಕ್ರಯ ಪತ್ರವನ್ನು ನೋಡಿರುತ್ತೇನೆ ಸದರಿ ಕ್ರಯಪತ್ರವನ್ನು ಕೆಂಚಯ್ಯ ಎಂಬುವವರು ದಿ.30-01-1992 ರಂದು ಬರೆದುಕೊಟ್ಟಿರುತ್ತಾರೆ. ಸದರಿ ಕ್ರಯ ಪತ್ರವಾದ ಸಮಯ ದಾವಾ ಷೆಡ್ಯೂಲ್ ಸ್ವತ್ತು ಸರ್ವೇ ನಂಬರ್ ಜಮೀನು ಎಂದರೆ ಸರಿ. ಸದರಿ ಸರ್ವೇ ನಂಬರಿನಲ್ಲಿ ಸುಮಾರು ಜನರು ಖಾಲಿ ನಿವೇಶನಗಳನ್ನು ಖರೀದಿ ಮಾಡಿರುತ್ತಾರೆ ಎಂದರೆ ಸರಿ. ಚೆನ್ನರಾಜೇ ಅರಸ್ ರವರು ದಾವಾ ಷೆಡ್ಯೂಲ್ ಸ್ವತ್ತನ್ನು ಖರೀದಿ ಮಾಡಿದ ನಂತರ ಅದನ್ನು ಅಳತೆ ಮಾಡಿಸಿರುವುದಿಲ್ಲ. ದಾವಾ ಸರ್ವೇ ನಂ.196 ರಲ್ಲಿ ಹುಚ್ಚಯ್ಯನವರು ಸಹ ಜಮೀನನ್ನು ಖರೀದಿ ಮಾಡಿರುತ್ತಾರೆ ಎಂದರೆ ಸರಿ. ಪ್ರತಿವಾದಿ ದಾವಾ ಸರ್ವೇ ನಂ.196 ರಲ್ಲಿ  ಮನೆ ಕಟ್ಟಿರುತ್ತಾರೆ ಎಂದರೆ ಸರಿ. ಸಾಕ್ಷಿ ಮುಂದುವರೆದು ಪ್ರತಿವಾದಿ ರವರು ತಳಪಾಯ ಹಾಕಿದ ಸಮಯ ನಾನು ಸ್ಥಳಕ್ಕೆ ಹೋಗಿದ್ದು ಆ ಸಮಯ ಪ್ರತಿವಾದಿಗಳು ಗಲಾಟೆ ಮಾಡಿದ್ದರಿಂದ ಮತ್ತೆ ನಾನು ಆ ಸ್ಥಳಕ್ಕೆ ಹೋಗಿರುವುದಿಲ್ಲ ಎಂದು ನುಡಿಯುತ್ತಾರೆ. ಪ್ರತಿವಾದಿಯ ಮನೆಯ ಉತ್ತರಕ್ಕೆ ಪ್ರತಿವಾಗಳಿಗೆ ಸೇರಿದ ಖಾಲಿ ನಿವೇಶನ ಇರುತ್ತದೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ನಮಗೆ ಸೇರಿದ ನಿವೇಶನ ಇರುತ್ತದೆ ಎಂದು ನುಡಿಯುತ್ತಾರೆ. ನನಗೆ ಈ ದಾವೆಯ ವಿಷಯವಾಗಲಿ ಅಥವಾ ದಾವಾ ಷೆಡ್ಯೂಲ್ ಸ್ವತ್ತಿನ ವಿಷಯವಾಗಲಿ ನನಗೆ ಗೊತ್ತಿರುವುದಿಲ್ಲ ಎಂದರೆ ಸರಿಯಲ್ಲ. ವಾದಿ ನನ್ನ ಸಂಬಂಧಿಕರಲ್ಲದೇ ಇದ್ದರೂ ಸಹ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2.ದಾವಾ ಷೆಡ್ಯೂಲ್ ಸ್ವತ್ತನ್ನು ಕ್ರಯಕ್ಕೆ ಪಡೆದ ನಂತರ ಕಂದಾಯವನ್ನು ಪಾವತಿ ಮಾಡಲಾಗಿರುತ್ತದೆ. ನಾವು ಕ್ರಯಕ್ಕೆ ಪಡೆದ ಸ್ವತ್ತನ್ನು ಅನ್ಯಕ್ರಾಂತ ಮಾಡಿಸಿರುವುದಿಲ್ಲ ದಾವಾ ಷೆಡ್ಯೂಲ್ ಸ್ವತ್ತು ನಮಗೆ ಸೇರಿರುವುದಿಲ್ಲ, ಸದರಿ ಸ್ವತ್ತನ್ನು 2 ಮತ್ತು 3 ನೇ ಪ್ರತಿವಾದಿಗಳು 1 ನೇ ಪ್ರತಿವಾದಿಗೆ ಬರೆದುಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ವಾಸ್ತವಾಂಶದ ಅರಿವು ವಾದಿಗೆ ಇರುವುದರಿಂದ ಅವರ ನ್ಯಾಯಾಲಯಕ್ಕೆ ಬರುತ್ತಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು**)

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**ಕಿ.ಪ್ರ.ದ. ನ್ಯಾ ದಂ. ನಂಜನಗೂಡು**